# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಡಿಕೇರಿ ಜಿಲ್ಲಾ ಜಲಾನಯನ ಅಭಿವೃದ್ಧಿ ಕಾಮಗಾರಿಗಳ ಅವ್ಯವಹಾರದ ಬಗ್ಗೆ ಜಂಟಿ ಇಲಾಖಾ ವಿಚಾರಣೆ-ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳ ನೇಮಕದ ಬಗ್ಗೆ.

ಓದಲಾಗಿದೆ.

1) ಸರ್ಕಾರದ ಆದೇಶ ಸಂಖ್ಯೆ: ಕೃತೋಇ 13 ಕೃಪವಿ 2005, ದಿನಾಂಕ: 05-01-2007.
2) ಸರ್ಕಾರದ ಆದೇಶ ಸಂಖ್ಯೆ: ಕೃತೋಇ 13 ಕೃಪವಿ 2005, ದಿನಾಂಕ: 29-07-2008.
3) ಸರ್ಕಾರದ ಆದೇಶ ಸಂಖ್ಯೆ: ಕೃತೋಇ 13 ಕೃಪವಿ 2005, ದಿನಾಂಕ: 26-03-2011
4) ಶ್ರೀ ಕೆ.ರಾಜಶೇಖರ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಹಾಗೂ ವಿಚಾರಣಾಧಿಕಾರಿ, ಇವರ ಮನವಿಯ ದಿನಾಂಕ: 11-04-2011
5) ಜ.ಅ.ಇ./ಆಡಳಿತ-03/ವಿನಿ-6/ವಿವ-54/2005-06, ದಿನಾಂಕ: 07-05-2011.

*********

**ಪ್ರಸ್ತಾವನೆ:**

ಮಡಿಕೇರಿ ಜಿಲ್ಲಾ ಜಲಾನಯನ ಅಭಿವೃದ್ಧಿ ಕಾಮಗಾರಿಗಳಲ್ಲಿ ನಡೆದ ಲೋಪದೋಷ ಮತ್ತು ಹಣಕಾಸಿನ ದುರುಪಯೋಗ ಪಡಿಸಿಕೊಂಡ ಜಲಾನಯನ ಇಲಾಖೆಯ ಈ ಕೆಳಕಂಡ ಅಧಿಕಾರಿ/ನೌಕರರ ಮೇಲಿನ ಜಂಟಿ ಇಲಾಖಾ ವಿಚಾರಣೆ ನಡೆಸಲು ಮೇಲ ಕ್ರಮಾಂಕ (1)ರಲ್ಲಿ ಓದಲಾದ ದಿನಾಂಕ; 05-01-2007ರ ಆದೇಶದಲ್ಲಿ ಶ್ರೀ ಟಿ.ಶಾಂತನಂ, ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

1. ಶ್ರೀ ಟಿ.ಎಸ್.ಕುಮಾರಸ್ವಾಮಿ, ಸಹಾಯಕ ಕೃಷಿ ನಿರ್ದೇಶಕರು, (ನಿವೃತ್ತ).
2. ಶ್ರೀ ಎ.ಎನ್.ರಂಗಸ್ವಾಮಿ, ಸಹಾಯಕ ಕೃಷಿ ಅಧಿಕಾರಿ (ನಿವೃತ್ತ).
3. ಶ್ರೀ ಜಿ.ಇ.ಮಂಜುನಾಥ್, ಕೃಷಿ ಸಹಾಯಕ.
4. ಶ್ರೀ ನಿಂಗಪ್ಪ, ಕೃಷಿ ಸಹಾಯಕ.
5. ಶ್ರೀ ಹೆಚ್.ವಿ. ಚಂದ್ರಶೇಖರ್, ಕೃಷಿ ಸಹಾಯಕ.
6. ಶ್ರೀ ಎಚ್.ಜಿ.ಪುಟ್ಟಪ್ಪ, ಕೃಷಿ ಸಹಾಯಕ.

ಶ್ರೀ ಟಿ.ಶಾಂತನಂರವರು ತಮ್ಮ ಆರೋಗ್ಯ ಸ್ಥಿತಿ ಉತ್ತಮವಾಗಿಲ್ಲ ಸದರಿ ವಿಚಾರಣೆಯನ್ನು ನಡೆಸುವುದು ಅವರಿಂದ ಸಾಧ್ಯವಾಗುವುದಿಲ್ಲವೆಂದು ತಿಳಿಸಿದ ಪ್ರಯುಕ್ತ ಮೇಲ ಕ್ರಮಾಂಕ (2)ರಲ್ಲಿ ಓದಲಾದ ದಿನಾಂಕ: 29-07-2008 ರಲ್ಲಿ ಶ್ರೀ ಬಿ.ಎಲ್.ಶ್ರೀಕಂಠಯ್ಯ, ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ. ಶ್ರೀ ಬಿ.ಎಲ್ ಶ್ರೀಕಂಠಯ್ಯ ಸದರಿ ಪ್ರಕರಣದ ವಿಚಾರಣಾಧಿಕಾರಿಗಳು ನಿಧನರಾದ ಪ್ರಯುಕ್ತ ಮೇಲ (3)ರಲ್ಲಿ ಓದಲಾದ ಆದೇಶದಲ್ಲಿ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಕೆ.ರಾಜಶೇಖರ್, ರವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಸದರಿ ಪ್ರಕರಣದ ವಿಚಾರಣಾಧಿಕಾರಿಗಳಾದ ಶ್ರೀ ಕೆ.ರಾಜಶೇಖರ್.ರವರು ಮೇಲೆ ಓದಲಾದ ಪತ್ರ (4)ರಲ್ಲಿ ಇವರು ಅನಾರೋಗ್ಯದ ಸಮಸ್ಯೆ ಹಾಗೂ ಅನಾನುಕೂಲದ ಕಾರಣದಿಂದ ವಿಚಾರಣಾಧಿಕಾರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತಿಲ್ಲವೆಂದು ತಿಳಿಸಿರುತ್ತಾರೆ. ಮೇಲೆ (5)ರಲ್ಲಿ ಓದಲಾದ ಜಲಾನಯನ ಅಭಿವೃದ್ಧಿ ಆಯುಕ್ತರ ಪತ್ರದಲ್ಲಿ ಸದರಿ ಪ್ರಕರಣದ ಮಂಡನಾಧಿಕಾರಿಯೂ ಸಹ ದಿನಾಂಕ: 30-04-2011ರಂದು ವಯೋನಿವೃತ್ತಿ ಹೊಂದಿರುವುದರಿಂದ ಅವರ ಬದಲಾಗಿ ಶ್ರೀ ಸಿದ್ದಯ್ಯ, ಅಧೀಕ್ಷಕರು, ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳ ಕಛೇರಿ, ಜಲಾನಯನ ಅಭಿವೃದ್ಧಿ ಇಲಾಖೆ, ಮಡಿಕೇರಿ. ರವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಬೇಕೆಂದು ಕೋರಿರುತ್ತಾರೆ. ಸರ್ಕಾರ ಈ ವಿಷಯವನ್ನು ಪರಿಶೀಲಿಸಿ ಪ್ರಕರಣದಲ್ಲಿ ಬೇರೊಬ್ಬರನ್ನು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳನ್ನು ನೇಮಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃತ್ತೋಇ 13 ಕೃಪಥಿ 2006**
**ಬೆಂಗಳೂರು, ದಿನಾಂಕ: 06/06/2011**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳಿಂದಾಗಿ ಸರ್ಕಾರವು ದಿನಾಂಕ: 29-07-2008ರ ಆದೇಶದಲ್ಲಿ ಪ್ರಸ್ತಾವನೆಯಲ್ಲಿ ಕಾಣಿಸಿರುವ ಅಧಿಕಾರಿ ನೌಕರರ ವಿರುದ್ಧದ ಆರೋಪಗಳ ಬಗ್ಗೆ ವಿಚಾರಣೆ ನಡೆಸಲು ನೇಮಿಸಲಾಗಿದ್ದ ವಿಚಾರಣಾಧಿಕಾರಿ ಶ್ರೀ ಕೆ. ರಾಜಶೇಖರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಅನಾರೋಗ್ಯದ ಸಮಸ್ಯೆ ಹಾಗೂ ಅನಾನುಕೂಲದ ಕಾರಣದಿಂದ ವಿಚಾರಣಾಧಿಕಾರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತಿಲ್ಲವೆಂದು ತಿಳಿಸಿರುವ ಹಿನ್ನಲೆಯಲ್ಲಿ ಅವರ ಬದಲಾಗಿ ಶ್ರೀ ಕೆ.ರಾಧಾಕೃಷ್ಣ, ಹೊಳ್ಳ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು. ಇವರನ್ನು ಪ್ರಕರಣದಲ್ಲಿನ ವಿಚಾರಣೆಯನ್ನು ಮುಂದುವರೆಸಲು ವಿಚಾರಣಾಧಿಕಾರಿಯನ್ನಾಗಿ ಮತ್ತು ಶ್ರೀ ಸಿದ್ದಯ್ಯ, ಅಧೀಕ್ಷಕರು, ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳ ಕಛೇರಿ, ಜಲಾನಯನ ಅಭಿವೃದ್ಧಿ ಇಲಾಖೆ, ಮಡಿಕೇರಿ. ರವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ. ಸದರಿ ವಿಚಾರಣಾಧಿಕಾರಿಯವರು ವಿಚಾರಣೆ ನಡೆಸಿ 60 ದಿನಗಳೊಳಗಾಗಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಇನ್ನುಳಿದಂತೆ ದಿನಾಂಕ: 05-01-2007ರ ಆದೇಶದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್) 06/6/11
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು ಕರ್ನಾಟಕ, ಬೆಂಗಳೂರು.
2) ಆಯುಕ್ತರು ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
3) ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
4) ಜಿಲ್ಲಾ ಜಲಾನಯನ ಅಧಿಕಾರಿ ಮೈಸೂರು.
5) ಶ್ರೀ ಕೆ.ರಾಜಶೇಖರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.898/77, 4ನೇ ಮುಖ್ಯರಸ್ತೆ, ವಿಜಯನಗರ, ಬೆಂಗಳೂರು-560 040.
6) ಶ್ರೀ ಕೆ.ರಾಧಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ:180 ಲಿಂಕ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.
7) ಜಂಟಿ ಕೃಷಿ ನಿರ್ದೇಶಕರು, ಮಡಿಕೇರಿ.
8) ಆಡಳಿತ ಅಧಿಕಾರಿ ಜಂಟಿ ಕೃಷಿ ನಿರ್ದೇಶಕರ ಕಛೇರಿ, ಮಡಿಕೇರಿ.
9) ಶ್ರೀ ಸಿದ್ದಯ್ಯ, ಅಧೀಕ್ಷಕರು, ಮತ್ತು ಪ್ರಕರಣದ ಮಂಡನಾಧಿಕಾರಿ, ಜಿಲ್ಲಾ ಜಲಾನಯನ ಅಭಿವೃದ್ಧಿ ಅಧಿಕಾರಿಗಳ ಕಛೇರಿ, ಜಲಾನಯನ ಅಭಿವೃದ್ಧಿ ಇಲಾಖೆ, ಮಡಿಕೇರಿ.
10) ಸಂಬಂಧಪಟ್ಟ ಅಧಿಕಾರಿಯವರಿಗೆ. (ಕೃಷಿ ಆಯುಕ್ತರ ಮೂಲಕ).
11) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
12) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.